# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 22.12.2025 ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಆನ್‌ಲೈನ್ ಮೂಲಕ ನಡೆದ ಶೈಕ್ಷಣಿಕ ಮಂಡಳಿಯ 2025-26ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಗಳು.**

ಉಪಸ್ಥಿತರು:

ಅನುಪಸ್ಥಿತರು:

## <u>ಪ್ರಾರಂಭಿಕ</u>

ಪ್ರಾರಂಭದಲ್ಲಿ ಮಾನ್ಯ ಕುಲಪತಿಯವರು ವಿಶ್ವವಿದ್ಯಾನಿಲಯದ ಶಾಸನಬದ್ಧ ಅಧಿಕಾರಿಗಳನ್ನು, ಎಲ್ಲಾ ನಿಕಾಯದ ಡೀನರುಗಳನ್ನು, ಆನ್‌ಲೈನ್‌ನಲ್ಲಿ ಹಾಜರಿರುವ ಶೈಕ್ಷಣಿಕ ಮಂಡಳಿಯ ಸದಸ್ಯರುಗಳನ್ನು, ವಿಶೇಷ ಆಹ್ವಾನಿತರುಗಳನ್ನು, ವಿಶ್ವವಿದ್ಯಾನಿಲಯದ ಆಡಳಿತ ಸಿಬ್ಬಂದಿಗಳನ್ನು ಹಾಗೂ ಪತ್ರಿಕಾ ಮಾಧ್ಯಮದವರನ್ನು ಸಭೆಗೆ ಸ್ವಾಗತಿಸಿ, ಸಭೆಯನ್ನು ಪ್ರಾರಂಭಿಸಿದರು.

- **ಸಂತಾಪ ಸೂಚಕ ನಿರ್ಣಯ:**

ಮೈಸೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿಗಳಾದ **ಪ್ರೊ. ಎಸ್.ಎನ್. ಹೆಗ್ಡೆ (83)** ಇವರು ದಿನಾಂಕ 17.12.2025 ರಂದು ಮೈಸೂರಿನಲ್ಲಿ ನಿಧನರಾಗಿದ್ದು, ಶ್ರೀಯುತರು ಮಂಗಳೂರು ವಿಶ್ವವಿದ್ಯಾನಿಲಯದ ಅನ್ವಯಿಕ ಪ್ರಾಣಿಶಾಸ್ತ್ರ ವಿಭಾಗದಲ್ಲಿ ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರಾಗಿ ಸೇವೆ ಸಲ್ಲಿಸಿದ್ದಾರೆ. ಇವರ ಮಾರ್ಗದರ್ಶನದಲ್ಲಿ ಅನೇಕ ಸಂಶೋಧನಾ ವಿದ್ಯಾರ್ಥಿಗಳು ಪಿಹೆಚ್.ಡಿ. ಪದವಿಯನ್ನು ಪಡೆದಿದ್ದು, ಶ್ರೀಯುತರು 1997 ರಿಂದ 2003 ರವರೆಗೆ ಒಟ್ಟು ಎರಡು ಅವಧಿಗಳ ಕಾಲ ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿಯಾಗಿದ್ದರು.

ಶ್ರೀಯುತರು ಮಂಗಳೂರು ವಿಶ್ವವಿದ್ಯಾನಿಲಯದ ಸೆನೆಟ್, ಶೈಕ್ಷಣಿಕ ಮಂಡಳಿ ಹಾಗೂ ಸಿಂಡಿಕೇಟ್ ಸದಸ್ಯರಾಗಿ ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಮತ್ತು ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ, ಸಹಕಾರಗಳನ್ನು ನೀಡಿರುವುದನ್ನು ಸ್ಮರಿಸಲಾಯಿತು. ಶ್ರೀಯುತರ ನಿಧನಕ್ಕೆ ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಯು ಅತೀವ ಸಂತಾಪಗಳನ್ನು ವ್ಯಕ್ತಪಡಿಸುತ್ತಾ, ಅಗಲಿದ ಪ್ರೊ. ಎಸ್.ಎನ್. ಹೆಗ್ಡೆಯವರ ಆತ್ಮಕ್ಕೆ ಚಿರಶಾಂತಿಯನ್ನು ಕೋರುವ ನಿರ್ಣಯವನ್ನು ಅಂಗೀಕರಿಸಲಾಯಿತು.

➢ **ಸ್ವಾಗತ:**

ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವ (ಆಡಳಿತ) ಹುದ್ದೆಯ ಪ್ರಭಾರವನ್ನು ವಹಿಸಿಕೊಂಡು, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(xviii)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಆಡಳಿತ) ನೆಲೆಯಲ್ಲಿ ಶೈಕ್ಷಣಿಕ ಮಂಡಳಿಯ ಸದಸ್ಯ ಕಾರ್ಯದರ್ಶಿಯಾಗಿರುವ **ಡಾ. ಗಣೇಶ್ ಸಂಜೀವ್**, ಹಿರಿಯ ಪ್ರಾಧ್ಯಾಪಕರು ಇವರನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(viii)ರ ಪ್ರಕಾರ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ **ಪ್ರೊ. ವೈ. ಮುನಿರಾಜು,** ಹಿರಿಯ ಪ್ರಾಧ್ಯಾಪಕರು, ವಾಣಿಜ್ಯಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ **ಪ್ರೊ. ಸೋಮಣ್ಣ,** ಹಿರಿಯ ಪ್ರಾಧ್ಯಾಪಕರು, ಎಸ್.ವಿ.ಪಿ. ಕನ್ನಡ ಅಧ್ಯಯನ ಸಂಸ್ಥೆ, ಮಂಗಳೂರು ವಿಶ್ವವಿದ್ಯಾನಿಲಯ ಇವರುಗಳನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(vi)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ;

- **ಪ್ರೊ.ಉದಯ ಕುಮಾರ್ ಬಿ.** ಪ್ರಾಂಶುಪಾಲರು, ಶ್ರೀ ಗೋಕರ್ಣನಾಥೇಶ್ವರ ಕಾಲೇಜ್ ಆಫ್ ಎಜ್ಯುಕೇಷನ್, ಗಾಂಧಿನಗರ, ಮಂಗಳೂರು.
- **ಶ್ರೀ ನಿತ್ಯಾನಂದ ವಿ. ಗಾಂವಕರ,** ಪ್ರಭಾರ ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರ, ತೆಂಕನಿಡಿಯೂರು, ಉಡುಪಿ.
- **ಡಾ. ಗಿರೀಶ ಭಟ್ ಎ.,,** ಪ್ರಭಾರ ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸಿದ್ದಕಟ್ಟೆ.
- **ಶ್ರೀಮತಿ ಶೃತಿ ಶೆಟ್ಟಿ,** ಪ್ರಾಂಶುಪಾಲರು, ಮ್ಯಾಪ್ಸ್ ಕಾಲೇಜು,ಚಿನ್ಮಯ ಲೇನ್, ಬಂಟ್ಸ್ ಹಾಸ್ಟಲ್, ಕದ್ರಿ ರಸ್ತೆ, ಮಂಗಳೂರು.
- **ಶ್ರೀ ಹಬೀಬು ರಹಿಮಾನ್ ಕೆ.ಎಸ್.,** ಪ್ರಾಂಶುಪಾಲರು, ಅಲ್-ಇಸಾನ್ ಪ್ರಥಮ ದರ್ಜೆ ಕಾಲೇಜು, ಮೂಳೂರು, ಉಚ್ಚಿಲ, ಕಾಪು ತಾಲೂಕು, ಉಡುಪಿ ಜಿಲ್ಲೆ

- **ಡಾ. ವಿನ್ಸೆಂಟ್ ಆಳ್ವ,** ಪ್ರಾಂಶುಪಾಲರು, ಮಿಲಾಗ್ರಿಸ್ ಕಾಲೇಜು, ಕಲ್ಯಾಣಪುರ, ಉಡುಪಿ ತಾಲೂಕು ಮತ್ತು ಜಿಲ್ಲೆ.
- **ಪ್ರೊ. ಸೂರಜ್ ಆರ್.ವಿ.,** ಪ್ರಾಂಶುಪಾಲರು, ಮೋತಿ ಮಹಲ್ ಕಾಲೇಜ್ ಆಫ್ ಹೋಟೆಲ್ ಮ್ಯಾನೇಜ್‌ಮೆಂಟ್, ಮಂಗಳೂರು.
- **ಶ್ರೀ ಸುಬ್ಬಪ್ಪ ಕೆ.,** ಪ್ರಭಾರ ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪುತ್ತೂರು.

ಇವರುಗಳನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

➢ **ಕೃತಜ್ಞತೆ**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(xviii)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಆಡಳಿತ) ನೆಲೆಯಲ್ಲಿ ಶೈಕ್ಷಣಿಕ ಮಂಡಳಿಯ ಸದಸ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದ **ಶ್ರೀ ಕೆ. ರಾಜು ಮೊಗವೀರ**, ಕೆ.ಎ.ಎಸ್., ಇವರು ದಿನಾಂಕ 30.11.2025 ರಂದು ವಯೋನಿವೃತ್ತಿ ಹೊಂದಿರುವುದರಿಂದ ಕುಲಸಚಿವರು (ಆಡಳಿತ) ಹುದ್ದೆಯಿಂದ ಮುಕ್ತಗೊಳಿಸಲಾಗಿದೆ.

ಸದರಿಯವರು ರಾಜ್ಯ ಸರ್ಕಾರದ ಹಿರಿಯ ಅಧಿಕಾರಿಯಾಗಿದ್ದು, ಆಡಳಿತದಲ್ಲಿ ಅಪಾರ ಅನುಭವವನ್ನು ಹೊಂದಿದ್ದು, ಶೈಕ್ಷಣಿಕ ಮಂಡಳಿ ಸಭೆಗಳಲ್ಲಿ ಸದಸ್ಯ ಕಾರ್ಯದರ್ಶಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಕ್ರಮ, ಸಲಹೆ ಮತ್ತು ಸಹಕಾರಗಳನ್ನು ನೀಡಿರುತ್ತಾರೆ. ಇವರಿಗೆ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಪರವಾಗಿ ಕೃತಜ್ಞತಾಪೂರ್ವಕ ವಂದನೆಗಳನ್ನು ಸಲ್ಲಿಸಲಾಯಿತು.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(viii)ರ ಪ್ರಕಾರ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ **ಪ್ರೊ. ವಿ. ರವೀಂದ್ರಾಚಾರಿ,** ಹಿರಿಯ ಪ್ರಾಧ್ಯಾಪಕರು, ಸ್ನಾತಕೋತ್ತರ ಭೌತಶಾಸ್ತ್ರ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ **ಪ್ರೊ. ಕರುಣಾಕರ ಎನ್.,** ಹಿರಿಯ ಪ್ರಾಧ್ಯಾಪಕರು ಹಾಗೂ ಸಂಯೋಜಕರು, ಸ್ನಾತಕೋತ್ತರ ಮೆಡಿಕಲ್ ಫಿಸಿಕ್ಸ್ ಇವರುಗಳ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(vi) ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ **ರೆ. ಫಾ. ಅರುಣ್ ವಿಲ್ಸನ್ ಲೋಬೊ,** ಪ್ರಾಂಶುಪಾಲರು, ಪಾದುವ ಕಾಲೇಜ್ ಅಫ್ ಕಾಮರ್ಸ್ & ಮ್ಯಾನೇಜ್ ಮೆಂಟ್, ಕದ್ರಿ ಹಿಲ್ಸ್, ನಂತೂರು, ಮಂಗಳೂರು ಇವರ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಸದರಿಯವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರೆಲ್ಲರೂ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುತ್ತಾರೆ. ಇವರಿಗೆ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಯ ಪರವಾಗಿ ಕೃತಜ್ಞತಾಪೂರ್ವಕ ವಂದನೆಗಳನ್ನು ಸಲ್ಲಿಸಲಾಯಿತು.

I. **ದಿನಾಂಕ 09.10.2025ರಂದು ನಡೆದ ಶೈಕ್ಷಣಿಕ ಮಂಡಳಿಯ 2025-26ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.**

- ದೃಢೀಕರಿಸಲಾಯಿತು-.

II. **ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ಪರಿನಿಯಮ / ವಿನಿಯಮಗಳು**

1. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅರೆಭಾಷೆ ಸಂಶೋಧನಾ ಕೇಂದ್ರ ಸ್ಥಾಪಿಸುವ ಕುರಿತು.

**ಪರಿನಿಯಮ ಅನುಮೋದನೆಗೊಂಡಿರುವ ಮಾಹಿತಿ ನೀಡಲಾಯಿತು**.

**III. ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು:**

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.3:1(2025)

ವಿಷಯ: ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿ ಪ್ರಕಾರ ತಯಾರಿಸಿರುವ ಬಿ.ಎ. ಪದವಿ ಕಾರ್ಯಕ್ರಮದ ಪತ್ರಿಕೋದ್ಯಮ ಕೋರ್ಸಿನ ತೃತೀಯ ಮತ್ತು

|  |  |
|---|---|
|  | ಚತುರ್ಥ ಸೆಮಿಸ್ಟರ್‌ಗಳಿಗೆ ಅನ್ವಯವಾಗುವ ಎಲೆಕ್ಟಿವ್ ಕೋರ್ಸುಗಳ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| **ನಿರ್ಣಯ:** | ಪಠ್ಯಕ್ರಮದಲ್ಲಿ ಶಿಫಾರಸ್ಸು ಮಾಡಿರುವ ಪರಾಮರ್ಶನ ಗ್ರಂಥಗಳು ಪ್ರಕಟಗೊಂಡ ವರ್ಷವನ್ನು ನಮೂದಿಸಲು, ಕೋರ್ಸಿನ ಶೀರ್ಷಿಕೆ ಬದಲಾವಣೆಯಾಗಿದ್ದು, ಈ ಬಗ್ಗೆ ಅಧ್ಯಯನ ಮಂಡಳಿಗೆ ಮರುಮಂಡಿಸಲು ನಿರ್ಣಯಿಸಲಾಯಿತು. |

|  |  |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಸಾ.ಸ.3:2(2025) |
| ವಿಷಯ: | ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿ ಪ್ರಕಾರ ತಯಾರಿಸಿರುವ IV ನೇ ಸೆಮಿಸ್ಟರ್ ಬಿ.ಎ. ಪದವಿ ಕಾರ್ಯಕ್ರಮದ ಅರ್ಥಶಾಸ್ತ್ರ ಕೋರ್ಸಿಗೆ ಸಂಬಂಧಿಸಿದ ಕೌಶಲ್ಯ ಆಧಾರಿತ ಕೋರ್ಸಿನ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| ನಿರ್ಣಯ: | ಪಠ್ಯಕ್ರಮದ ಬಗ್ಗೆ ಕಲಾ ನಿಕಾಯದ ಡೀನರೊಂದಿಗೆ ಚರ್ಚಿಸಿ, ಸಭೆಯಲ್ಲಿ ಸೂಚಿಸಿರುವ ತಿದ್ದುಪಡಿಯೊಂದಿಗೆ ಮರು ಮಂಡಿಸುವಂತೆ ನಿರ್ಣಯಿಸಲಾಯಿತು. |

|  |  |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಸಾ.ಸ.3:3(2025) |
| ವಿಷಯ: | ಸ್ಪೀಚ್ ಆಂಡ್ ಹಿಯರಿಂಗ್ ಪಿಹೆಚ್.ಡಿ. ಕೋರ್ಸು ವರ್ಕ್‌ನ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| ನಿರ್ಣಯ: | ಅನುಮೋದಿಸಲಾಯಿತು. |

|  |  |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಡಿಸಿ:ಸಾ.ಸ.3:4(2025) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಅಧೀನದಲ್ಲಿರುವ ಕೆಲವೊಂದು ಕಾಲೇಜುಗಳು ಸಂಯೋಜನೆಯನ್ನು ಮುಂದುವರಿಸದಿರುವ ಬಗ್ಗೆ. |
| ನಿರ್ಣಯ: | ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.3:5(2025) |
| ವಿಷಯ: | ಪ್ರೊ.ಸೂರಜ್ ಆರ್.ವಿ., ಶೈಕ್ಷಣಿಕ ಮಂಡಳಿ ಸದಸ್ಯರು ಸಲ್ಲಿಸಿರುವ ಗೊತ್ತುವಳಿ ಬಗ್ಗೆ. |
| ನಿರ್ಣಯ: | ಈ ಬಗ್ಗೆ ಹೋಟೆಲ್ ಮ್ಯಾನೇಜ್ಮೆಂಟ್ ಅಧ್ಯಯನ ಮಂಡಳಿಯಲ್ಲಿ ಚರ್ಚಿಸಿ ನಿರ್ಣಯ ಕೈಗೊಳ್ಳಲು ನಿರ್ಣಯಿಸಲಾಯಿತು ಹಾಗೂ B.A. Culinary Arts & Management ಕಾರ್ಯಕ್ರಮವನ್ನು ಕಲಾ ನಿಕಾಯದಡಿಯಲ್ಲಿ ಪ್ರಾರಂಭಿಸುವುದಾದಲ್ಲಿ ಕೋರ್ಸ್ನ ಸುಸ್ಥಿರತೆಯ ಬಗ್ಗೆ ಹಾಗೂ ಸದರಿ ಕಾರ್ಯಕ್ರಮ ಪೂರ್ಣಗೊಳಿಸಿದ ನಂತರ ಉನ್ನತ ಶಿಕ್ಷಣಕ್ಕೆ (M.A.) ಅವಕಾಶವಿದೆಯೇ? ಈ ಎಲ್ಲಾ ವಿಷಯಗಳ ಸಾಧಕ ಬಾಧಕಗಳನ್ನು ಅಧ್ಯಯನ ಮಂಡಳಿ ಸಭೆಯಲ್ಲಿ ಚರ್ಚಿಸಿ ನಿರ್ಣಯ ಕೈಗೊಂಡು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಸಾ.ಸ.3:6(2025) |
| ವಿಷಯ: | Post Doctoral Research ಕಾರ್ಯಕ್ರಮದ ಪರಿಷ್ಕೃತ ಮಾರ್ಗಸೂಚಿಯ ಅನುಮೋದನೆ ಬಗ್ಗೆ. |
| ನಿರ್ಣಯ: | ಡೀನರ ಸಮಿತಿಯ ಪರಿಶೀಲನೆಗೆ ಒಳಪಡಿಸಲು ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಸಾ.ಸ.3:7(2025) |
| ವಿಷಯ: | ಸ್ನಾತಕೋತ್ತರ ಅರ್ಥಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| ನಿರ್ಣಯ: | ಪೇಪರ್ ಕೋಡ್ಗಳನ್ನು ಕೋರ್ಸ್ ಕೋಡ್ ಎಂದು ಬದಲಾಯಿಸಿ ಪ್ರಚಲಿತ ವಿದ್ಯಾಮಾನಕ್ಕೆ ಅನುಗುಣವಾಗಿ ಪರಾಮರ್ಶನ ಗ್ರಂಥಗಳ ಪಟ್ಟಿಯನ್ನು ನವೀಕರಿಸಿ IQAC ಘಟಕದೊಂದಿಗೆ ಸಮಾಲೋಚಿಸುವ ಷರತ್ತಿನೊಂದಿಗೆ ಅನುಮೋದಿಸಲಾಯಿತು. |

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.3:8(2025)

ವಿಷಯ: National Higher Education Qualification Framework (NHEQF) ನ ಅಂಶಗಳನ್ನು ವಿಶ್ವವಿದ್ಯಾನಿಲಯದ ಬೋಧನಾ ಕ್ರಮಗಳಲ್ಲಿ ಅಳವಡಿಸಿರುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.3:9(2025)

ವಿಷಯ: ಶೈಕ್ಷಣಿಕ ವರ್ಷ 2025-26ನೇ ಸಾಲಿನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ವಿವಿಧ ಸ್ನಾತಕ/ ಸ್ನಾತಕೋತ್ತರ/ ಪಿಹೆಚ್.ಡಿ. ಕಾರ್ಯಕ್ರಮಗಳಿಗೆ ವಿದೇಶಿ ವಿದ್ಯಾರ್ಥಿಗಳ ಪ್ರವೇಶಾತಿ ಬಗ್ಗೆ.

ನಿರ್ಣಯ: ಈ ಕುರಿತು ಶೈಕ್ಷಣಿಕ ಮಂಡಳಿ ಸಮಿತಿ ನಿರ್ಣಯವನ್ನು ಅನುಮೋದಿಸಲಾಯಿತು.

ಕೊನೆಯದಾಗಿ ಕುಲಸಚಿವರು ಸದಸ್ಯರುಗಳ ಸಲಹೆ ಸಹಕಾರಗಳಿಗೆ ಹಾಗೂ ಭಾಗವಹಿಸಿದ ಎಲ್ಲಾ ಅಧಿಕಾರಿಗಳಿಗೆ, ಮಾಧ್ಯಮದವರಿಗೆ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

**ಸಹಿ/-**
**ಕುಲಸಚಿವರು**

**ಸಹಿ/-**
**ಕುಲಪತಿಗಳು**